# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 421

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 18.02.2022

ಉತ್ತರಿಸುವ ಸಚಿವರು : ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ರಾಗಿ ಖರೀದಿ ಮಾಡಲು ಸರ್ಕಾರವು ರೂಪಿಸಿರುವ ನಿಯಮ ಮತ್ತು ನಿಬಂಧನೆಗಳೇನು; (ಆದೇಶಗಳ ಸಹಿತ ನೀಡುವುದು) | 2021-22ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ 2.10 ಲಕ್ಷ ಮೆ.ಟನ್ ರಾಗಿಯನ್ನು ರಾಜ್ಯದ ಸಣ್ಣ ಮತ್ತು ಅತೀ ಸಣ್ಣ ರೈತರಿಂದ ಉತ್ಪಾದನೆ ಅನುಗುಣವಾಗಿ ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ಗರಿಷ್ಟ 20 ಕ್ವಿಂಟಾಲ್ ಪ್ರಮಾಣವನ್ನು ಖರೀದಿಸಲು ಆದೇಶಿಸಲಾಗಿದೆ. (ಆದೇಶದ ಪ್ರತಿಯನ್ನು ಅನುಬಂಧ-1ರಲ್ಲಿ ಒದಗಿಸಲಾಗಿದೆ) |
| ಆ | ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಉತ್ಪಾದನೆಯಾದ ರಾಗಿಯ ಪ್ರಮಾಣವೆಷ್ಟು; ಈ ಸಾಲುಗಳಲ್ಲಿ ಬೆಂಬಲ ಬೆಲೆ ಯೋಜನೆಯಡಿ ಸರ್ಕಾರ ಖರೀದಿಸಬೇಕಾದ ರಾಗಿ ಪ್ರಮಾಣದ ಗುರಿ ಎಷ್ಟು; ಇದರಲ್ಲಿ ರೈತರಿಂದ ಖರೀದಿಸಿದ ಪ್ರಮಾಣವೆಷ್ಟು; ಪ್ರತಿ ಕ್ವಿಂಟಲ್‌ಗೆ ಸರ್ಕಾರ ನೀಡಿದ ಬೆಲೆ ಎಷ್ಟು;(ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು) | ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಉತ್ಪಾದನೆಯಾದ ರಾಗಿಯ ಪ್ರಮಾಣ, ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಿ ನಿಗಧಿಪಡಿಸಿದ ಪ್ರಮಾಣ, ಖರೀದಿ ಮಾಡಲಾದ ರಾಗಿಯ ಪ್ರಮಾಣ ಹಾಗೂ ನಿಗಧಿಪಡಿಸಿದ ಬೆಲೆಯ ಮಾಹಿತಿಯು ಈ ಕೆಳಕಂಡಂತಿದೆ: |

| ಕ್ರ.ಸಂ | ವರ್ಷ | ಉತ್ಪಾದನೆ ಲಕ್ಷ ಮೆಟ್ರಿಕ್ ಟನ್‌ಗಳಲ್ಲಿ | ಕೇಂದ್ರ ಸರ್ಕಾರವು ನೀಡಿದ ಅನುಮತಿಯ ಪ್ರಮಾಣ (ಲಕ್ಷ ಮೆ.ಟನ್ ಗಳಲ್ಲಿ) | ದರ ಪ್ರತಿ ಕ್ವಿಂಟಾಲ್ (ರೂ.ಗಳಲ್ಲಿ) | ಖರೀದಿಸಲಾದ ರಾಗಿ ಯ ಪ್ರಮಾಣ ( ಮೆ.ಟನ್ ಗಳಲ್ಲಿ) |
|---|---|---|---|---|---|
| 1 | 2018-19 | 6.78 | 94,459 | 2897.00 | 94390.08 |
| 2 | 2019-20 | 11.62 | 3.00 | 3150.00 | 1,93,243.68 |
| 3 | 2020-21 | 13.69 | 7.00 | 3377.00 | 4,75,315.2 |

| | | |
|---|---|---|
| ಇ | ಬೆಂಬಲ ಬೆಲೆ ಯೋಜನೆಯಡಿ ಸರ್ಕಾರವು ಖರೀದಿಸುವ ರಾಗಿ ಪ್ರಮಾಣಕ್ಕೆ ಮಿತಿ ಹೇರಿರುವುದರಿಂದ, ರೈತರಿಗೆ ಆಗುತ್ತಿರುವುದು ತೊಂದರೆಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು) | ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ 2021-22ನೇ ಸಾಲಿನ ಮುಂಗಾರು ಋತುವಿನಲ್ಲಿ 2.10 ಲಕ್ಷ ಮೆ.ಟನ್ ರಾಗಿಯನ್ನು ಮಾರಾಟ ಮಾಡಲು ಒಟ್ಟು 13329 ರೈತರು ನೋಂದಣಿ ಮಾಡಿಕೊಂಡಿರುವ ಹಿನ್ನೆಲೆಯಲ್ಲಿ ಪ್ರಸ್ತುತ ರೈತರ ನೋಂದಣಿ ಕಾರ್ಯವನ್ನು ಸ್ಥಗಿತಗೊಳಿಸಲಾಗಿದ್ದು, ನೋಂದಾಯಿತ ರೈತರಿಂದ ರಾಗಿ ಖರೀದಿಯ ಪ್ರಕ್ರಿಯೆಯು ದಿನಾಂಕ:30.03.2022 ರವರೆಗೆ ಚಾಲ್ತಿಯಲ್ಲಿರುತ್ತದೆ. ರಾಜ್ಯದ ರೈತರು ರಾಗಿಯನ್ನು ಹೆಚ್ಚಾಗಿ ಬೆಳೆದಿರುವುದರಿಂದ ಭಾರತ ಆಹಾರ ನಿಗಮದ ಮುಖಾಂತರ 3 ಲಕ್ಷ ಮೆ.ಟನ್ ರಾಗಿಯನ್ನು ನೇರವಾಗಿ ಖರೀದಿಸುವಂತೆ ಕೇಂದ್ರ ಸರ್ಕಾರವನ್ನು ಕೋರಲಾಗಿದೆ. |

ಆನಾಸ 26 ಆರ್‌ಪಿಆರ್ 2022 (ಇ-ಆಫೀಸ್)

(ಉಮೇಶ ವಿ. ಕತ್ತಿ)
ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ 2021-22ನೇ ಸಾಲಿನ ಮುಂಗಾರು ಋತುವಿನಲ್ಲಿ ರಾಜ್ಯದ ರೈತರಿಂದ ರಾಗಿ ಮತ್ತು ಜೋಳ ಖರೀದಿ ಮಾಡುವ ಬಗ್ಗೆ.

**ಓದಲಾಗಿದೆ:**-1.ಕೇಂದ್ರ ಸರ್ಕಾರದ ಪತ್ರ ಸಂಖ್ಯೆ:3(19)/2020-ಪಿವೈ-I, ದಿನಾಂಕ: 16.06.2021

2. ಸಚಿವ ಸಂಪುಟ ಉಪಸಮಿತಿ ಸಭೆಯ ನಡವಳಿ ದಿನಾಂಕ: 24.11.2021.

3. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 7-13/2021-py-III(378121), ದಿನಾಂಕ: 14.12.2021.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಸಂಖ್ಯೆ(1) ರಲ್ಲಿನ ಪತ್ರದಲ್ಲಿ, ಕೇಂದ್ರ ಸರ್ಕಾರವು 2021-22ನೇ ಸಾಲಿಗೆ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಖರೀದಿಸುವ ರಾಗಿ ಮತ್ತು ಬಿಳಿಜೋಳ ಆಹಾರಧಾನ್ಯಗಳಿಗೆ ಈ ಕೆಳಕಂಡಂತೆ ದರ ನಿಗದಿಪಡಿಸಿದೆ.

| ಕ್ರ.ಸಂ | ಧಾನ್ಯ | ದರ (ಪ್ರತಿ ಕ್ವಿಂಟಾಲ್ ಗೆ)ರೂ.ಗಳಲ್ಲಿ |
|---|---|---|
| 1 | ಬಿಳಿಜೋಳ-ಹೈಬ್ರಿಡ್ | 2738-00 |
| 2 | ಬಿಳಿಜೋಳ-ಮಾಲ್ದಂಡಿ | 2758-00 |
| 3 | ರಾಗಿ | 3377-00 |

ಮೇಲೆ ಓದಲಾದ (2)ರಲ್ಲಿನ ಸಚಿವ ಸಂಪುಟ ಉಪ ಸಮಿತಿಯ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ನಡವಳಿಯಲ್ಲಿ 2021-22ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಯೋಜನೆಯಡಿ ರಾಜ್ಯದ ರೈತರಿಂದ 2.1 ಲಕ್ಷ ಮೆಟ್ರಿಕ್ ಟನ್ ರಾಗಿ ಮತ್ತು 2.00 ಲಕ್ಷ ಮೆಟ್ರಿಕ್ ಟನ್ ಜೋಳವನ್ನು ಖರೀದಿ ಮಾಡಲು ಅನುಮೋದನೆಯನ್ನು ನೀಡಿದೆ.

ಮೇಲೆ ಓದಲಾದ (3) ರಲ್ಲಿನ ಪತ್ರದಲ್ಲಿ ಕೇಂದ್ರ ಸರ್ಕಾರವು 2021-22ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದ ರೈತರಿಂದ 2.1 ಲಕ್ಷ ಮೆಟ್ರಿಕ್ ಟನ್ ರಾಗಿ ಮತ್ತು 1.10 ಲಕ್ಷ ಮೆಟ್ರಿಕ್ ಟನ್ ಜೋಳವನ್ನು ಖರೀದಿಸಲು ಅನುಮತಿಯನ್ನು ನೀಡಿದೆ.

2021-22ನೇ ಸಾಲಿನ ಮುಂಗಾರು ಋತುವಿನಲ್ಲಿ ರೈತರು ಬೆಳೆದಿರುವ ಆಹಾರ ಧಾನ್ಯಗಳ ಖರೀದಿಗೆ ಸಂಬಂಧಿಸಿದಂತೆ ಈಗಾಗಲೇ ಕೃಷಿ ಇಲಾಖೆಯಿಂದ ಜಾರಿಗೊಳಿಸಿರುವ "ಫ್ರೂಟ್ಸ್" ದತ್ತಾಂಶದಿಂದ ರೈತರ ಮಾಹಿತಿಯನ್ನು ನೇರವಾಗಿ ಪಡೆದು, ಕೃಷಿ ಇಲಾಖೆ ಒದಗಿಸಿರುವ ಸರಾಸರಿ ಬೆಳೆ ಮಾಹಿತಿಯನ್ವಯ ಹಾಗೂ ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಆಹಾರಧಾನ್ಯವನ್ನು ಮಾರಾಟ ಮಾಡಲು ನೋಂದಣಿ ಮಾಡಿದಂತಹ ರೈತರಿಂದ ರಾಗಿ ಮತ್ತು ಬಿಳಿಜೋಳವನ್ನು ಸಂಗ್ರಹಣಾ ಏಜೆನ್ಸಿಗಳಾದ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ ಮತ್ತು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಗಳ ಮೂಲಕ ಖರೀದಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ, ಈ ಕೆಳಕಂಡ ಆದೇಶ:

**ಸರ್ಕಾರದ ಆದೇಶ ಸಂಖ್ಯೆ: ಆನಾಸ 57 ಆರ್ ಪಿಆರ್ 2021ಭಾ-2(ಇ-ಆಫೀಸ್)**

**ಬೆಂಗಳೂರು, ದಿನಾಂಕ:14.12.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2021-22 ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದ ಸಣ್ಣ ಮತ್ತು ಅತಿ ಸಣ್ಣ ರೈತರಿಂದ 2.1 ಲಕ್ಷ ಮೆಟ್ರಿಕ್ ಟನ್ ರಾಗಿಯನ್ನು ಪ್ರತಿ ಕ್ವಿಂಟಾಲ್ ಗೆ

-2

ರೂ.3377 ರ ದರದಲ್ಲಿ, ಹಾಗೂ 1.10 ಲಕ್ಷ ಮೆಟ್ರಿಕ್ ಟನ್ ಜೋಳವನ್ನು (ಬಿಳಿಜೋಳ ಹೈಬ್ರಿಡ್-ರೂ.2738 ಹಾಗೂ ಬಿಳಿಜೋಳ ಮಾಲ್ದಂಡಿ-ರೂ.2758) ಖರೀದಿಸಲು ಅನುಮತಿಯನ್ನು ನೀಡಿದೆ.

2021-22 ನೇ ಸಾಲಿಗೆ ರೈತರಿಂದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಗಿ ಮತ್ತು ಜೋಳವನ್ನು ಖರೀದಿಸಲು ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ ಮತ್ತು ಕರ್ನಾಟಕ ರಾಜ್ಯ ಸಹಕಾರ ಮಾರುಕಟ್ಟೆ ಮಹಾ ಮಂಡಳಿ ಗಳನ್ನು ಸಂಗ್ರಹಣಾ ಏಜೆನ್ಸಿಗಳನ್ನಾಗಿ ನೇಮಿಸಿ, ಈ ಕೆಳಕಂಡಂತೆ ಜಿಲ್ಲೆಗಳನ್ನು ಹಂಚಿಕೆ ಮಾಡಲಾಗಿದೆ. ಅಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ನೀಡುವ ಸೂಚನೆ/ಆದೇಶಗಳನ್ವಯ ಖರೀದಿ ಪ್ರಕ್ರಿಯೆಯನ್ನು ಕೈಗೊಳ್ಳಲು ಆದೇಶಿಸಿದೆ.

| ಕ್ರ.ಸಂ | ಸಂಗ್ರಹಣಾ ಸಂಸ್ಥೆ | ನಿಯೋಜಿಸಿರುವ ಜಿಲ್ಲೆ |
|---|---|---|
| 1 | ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ | ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಶಿವಮೊಗ್ಗ, ರಾಮನಗರ, ಚಿಕ್ಕಬಳ್ಳಾಪುರ, ರಾಯಚೂರು, ಹಾವೇರಿ, ಕೊಪ್ಪಳ, ವಿಜಯಪುರ, ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ದಾವಣಗೆರೆ, ಬಾಗಲಕೋಟೆ, ತುಮಕೂರು, ಚಿತ್ರದುರ್ಗ, ಕಲಬುರಗಿ, ಬಳ್ಳಾರಿ, ಬೀದರ್, ಯಾದಗಿರಿ. |
| 3 | ಕರ್ನಾಟಕ ರಾಜ್ಯ ಸಹಕಾರ ಮಾರುಕಟ್ಟೆ ಮಹಾಮಂಡಳಿ | ಹಾಸನ, ಬೆಳಗಾವಿ, ಧಾರವಾಡ, ಕೊಡಗು, ಗದಗ, ಚಿಕ್ಕಮಗಳೂರು, ಚಾಮರಾಜನಗರ, ಮಂಡ್ಯ ಮತ್ತು ಮೈಸೂರು |

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಗಿ ಮತ್ತು ಜೋಳದ ಖರೀದಿಗೆ ದಿನಾಂಕ: 01-01-2022 ರಿಂದ ದಿನಾಂಕ: 31-03-2022 ರ ಅವಧಿಯನ್ನು ನಿಗದಿಪಡಿಸಲಾಗಿದೆ. ಎಲ್ಲಾ ಜಿಲ್ಲೆಗಳಲ್ಲಿ ಖರೀದಿಗೆ ಸಂಬಂಧಿಸಿದಂತೆ ಸಂಗ್ರಹಣಾ ಏಜೆನ್ಸಿಗಳು ತಕ್ಷಣದಿಂದ ಜಾರಿಗೆ ಬರುವಂತೆ ರೈತರ ನೋಂದಣಿ ಕಾರ್ಯವನ್ನು ಹಾಗೂ ಖರೀದಿ ಕೇಂದ್ರಗಳನ್ನು ತೆರೆಯತಕ್ಕದ್ದು. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಲಾಗುವ ಟಾಸ್ಕ್‌ಫೋರ್ಸ್ ಸಮಿತಿಯು ಕೂಡಲೇ ಖರೀದಿಗೆ ಸಂಬಂಧಿಸಿದ ಅಗತ್ಯ ಪ್ರಕ್ರಿಯೆಗಳನ್ನು ಪ್ರಾರಂಭಿಸಲು ಕ್ರಮವಹಿಸತಕ್ಕದ್ದು.

ಸದರಿ ಖರೀದಿಗೆ ಅವಶ್ಯವಿರುವ ದತ್ತಾಂಶ/ತಂತ್ರಾಂಶವನ್ನು ಆಯುಕ್ತರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರು ಎನ್.ಐ.ಸಿ ಸಹಯೋಗದೊಂದಿಗೆ ಸಿದ್ಧಪಡಿಸತಕ್ಕದ್ದು, ಹಾಗೂ ಕೇಂದ್ರ ಸರ್ಕಾರದ ಪೋರ್ಟಲ್‌ನಲ್ಲಿ ಅಗತ್ಯ ದತ್ತಾಂಶವನ್ನು ದಾಖಲಿಸತಕ್ಕದ್ದು.

### ರಾಗಿ ಮತ್ತು ಬಿಳಿಜೋಳ ಖರೀದಿಗೆ ಮಾರ್ಗಸೂಚಿಗಳು

1. ಸರ್ಕಾರದಿಂದ ನೇಮಿಸಲ್ಪಟ್ಟ ಖರೀದಿ ಏಜೆನ್ಸಿಗಳು ರಾಗಿ ಮತ್ತು ಬಿಳಿಜೋಳವನ್ನು ಖರೀದಿ ಹಂತದಲ್ಲಿ ಕೇಂದ್ರ ಸರ್ಕಾರವು ನಿಗದಿಪಡಿಸಿದ ಮಾನದಂಡಗಳನ್ವಯ ಎಫ್.ಎ.ಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಈ ಕೆಳಗಿನಂತೆ ಕ್ರಮವಹಿಸುವುದು.
2. ಪ್ರತಿ ಖರೀದಿ ಕೇಂದ್ರಕ್ಕೆ ಕೃಷಿ ಇಲಾಖೆಯ ಗ್ರೇಡರ್‌ಗಳನ್ನು ನೇಮಿಸುವುದು.
3. ಪ್ರತಿ ಖರೀದಿ ಕೇಂದ್ರಗಳಲ್ಲಿ ಕೃಷಿ ಇಲಾಖೆಯ ಗ್ರೇಡರ್ ಗಳೊಂದಿಗೆ ಆಹಾರ ಧಾನ್ಯಗಳನ್ನು ಗುಣಮಟ್ಟವನ್ನು ಜಂಟಿಯಾಗಿ ದೃಢೀಕರಿಸಲು ಮೂರನೇ ವ್ಯಕ್ತಿ ಗುಣಮಟ್ಟ ಪರಿಷ್ಕರಣಾ ಸಂಸ್ಥೆಗಳನ್ನು ನಿಯಮಾನುಸಾರ ನೇಮಿಸಿಕೊಳ್ಳಲು ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮವು ಎಲ್ಲಾ ಸಂಗ್ರಹಣಾ ಸಂಸ್ಥೆಗಳ ಪರವಾಗಿ ಅಲ್ಪಾವಧಿ ಟೆಂಡರ್ ಕರೆಯುವುದು.

4. ಖರೀದಿ ಏಜೆನ್ಸಿಯ ಹಿರಿಯ ಅಧಿಕಾರಿಗಳು ಆಗ್ಗಿಂದಾಗೆ ಮೇಲುಸ್ತುವಾರಿ ತಪಾಸಣೆ ಕೈಗೊಳ್ಳುವುದು ಹಾಗೂ ಖರೀದಿ ಏಜೆನ್ಸಿಗಳು ರೈತರಿಂದ ಖರೀದಿ ಮಾಡುವ ರಾಗಿ ಮತ್ತು ಬಿಳಿಜೋಳವನ್ನು ರೈತರು ತುಂಬಿಸಿ ತರುವ ಒಮ್ಮೆ ಬಳಸಿದ ಉತ್ತಮ ಗುಣಮಟ್ಟದ ಗೋಣಿ ಚೀಲದಲ್ಲಿಯೇ ಖರೀದಿಸಲು ಮತ್ತು ಗೋಣಿ ಚೀಲ ಖರೀದಿ ವೆಚ್ಚ ಪ್ರತ 50 ಕೆ.ಜಿ ಚೀಲಕ್ಕೆ ರೂ.22/- ರಂತೆ ನೇರ ನಗದು ವರ್ಗಾವಣೆ (Direct Benifit transfer) ಮೂಲಕ ರೈತರಿಗೆ ಪಾವತಿಸುವುದು ಮತ್ತು ರೈತರಿಂದ ಖರೀದಿಸುವ ಗೋಣಿಚೀಲವು ಉತ್ತಮ ಗುಣಮಟ್ಟವಾಗಿರುವುದನ್ನು ಸಂಗ್ರಹಣಾ ಏಜೆನ್ಸಿಗಳು ಖಾತರಿಪಡಿಸಿಕೊಳ್ಳತಕ್ಕದ್ದು.
5. ಪ್ರತಿ ರೈತರಿಂದ ಉತ್ಪಾದನೆಗೆ ಅನುಗುಣವಾಗಿ ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ಗರಿಷ್ಠ 20 ಕ್ವಿಂಟಾಲ್ ರಾಗಿ ಹಾಗೂ ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ಗರಿಷ್ಠ 20 ಕ್ವಿಂಟಾಲ್ ಜೋಳವನ್ನು ಖರೀದಿಸುವುದು.
6. ಸರ್ಕಾರವು ನಿಗಧಿಪಡಿಸಿರುವ ಪ್ರಮಾಣವನ್ನು ಮೀರಿ ಹೆಚ್ಚುವರಿಯಾಗಿ ರಾಗಿ ಹಾಗೂ ಜೋಳವನ್ನು ಖರೀದಿಸುವಂತಿಲ್ಲ.
7. ರಾಜ್ಯದಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯ ಅನುಷ್ಠಾನದಲ್ಲಿ ಅಪರ ನಿರ್ದೇಶಕರು-1, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರು ರಾಜ್ಯ ಮಟ್ಟದ ನೋಡಲ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲು ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ

(ಕೆ. ವೆಂಕಟೇಶ್)

ಸರ್ಕಾರದ ಅಧೀನ ಕಾರ್ಯದರ್ಶಿ

ಆಹಾರ ನಾಗರಿಕ ಸರಬರಾಜು ಗ್ರಾಹಕರ ವ್ಯವಹಾರಗಳ

ಮತ್ತು ಕಾನೂನು ಮಾಪನಶಾಸ್ತ್ರ ಇಲಾಖೆ,

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001.
2. ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
3. ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹು ಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಆಯುಕ್ತರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ವ್ಯವಸ್ಥಾಪಕ ನಿರ್ದೇಶರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶರು, ಕರ್ನಾಟಕ ರಾಜ್ಯ ಸಹಕಾರ ಮಾರುಕಟ್ಟೆ ಮಹಾಮಂಡಳಿ, ಬೆಂಗಳೂರು
10. ವ್ಯವಸ್ಥಾಪಕ ನಿರ್ದೇಶರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ, ರಾಜಭವನ ರಸ್ತೆ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶರು (ಕೆ.ಟಿ.ಕೆ), ಭಾರತ ಆಹಾರ ನಿಗಮ, ಬೆಂಗಳೂರು.

12. ಅಪರ ನಿರ್ದೇಶಕರು-1, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು.
13. ಸಂಬಂಧಪಟ್ಟ ಜಿಲ್ಲೆಯ ಜಂಟಿ ನಿರ್ದೇಶಕರು /ಉಪ ನಿರ್ದೇಶಕರು , ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, (ಆಯುಕ್ತರು, ಆನಾಸ & ಗ್ರಾವ್ಯ ಇಲಾಖೆ ಇವರ ಮುಖಾಂತರ)
14. ಸಂಬಂಧಪಟ್ಟ ಜಿಲ್ಲೆಯ ವ್ಯವಸ್ಥಾಪಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, (ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು ಇವರ ಮುಖಾಂತರ)
15. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:**

1. ಸನ್ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳ, ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.